# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀಮತಿ ಎಂ.ಎನ್.ಸವಿತಾ, ಸದಸ್ಯರು, ಹಾಕತ್ತೂರು ಗ್ರಾಮ ಪಂಚಾಯಿತಿ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ, ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಡಗು ಜಿಲ್ಲೆ ರವರ ಪತ್ರ ಸಂಖ್ಯೆ: ಕೊಜಿಪಂ:ಅಭಿ-1:ವಸತಿ:22:2017-18 ದಿನಾಂಕ:06-05-2017.
2. ಸರ್ಕಾರದ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ 633 ಗ್ರಾಪಂಅ 2017 ದಿನಾಂಕ 09.06.2017.
3. ಶ್ರೀ ಶ್ರೀಮತಿ ಎಂ.ಎನ್.ಸವಿತಾ, ಸದಸ್ಯರು, ಹಾಕತ್ತೂರು ಗ್ರಾಮ ಪಂಚಾಯಿತಿ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ ರವರ ಲಿಖಿತ ಹೇಳಿಕೆ. ದಿನಾಂಕ: 27.06.2017
4. ವಿಚಾರಣಾ ತಿಳುವಳಿಕೆ ಪತ್ರ ದಿನಾಂಕ: 09.08.2017

ಪ್ರಸ್ತಾವನೆ :

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಡಗು ಜಿಲ್ಲೆ ರವರ ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಶ್ರೀಮತಿ ಎಂ.ಎನ್.ಸವಿತಾ, ಸದಸ್ಯರು, ಹಾಕತ್ತೂರು ಗ್ರಾಮ ಪಂಚಾಯಿತಿ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ ರವರು ವಸತಿ ಯೋಜನೆಯ ಮಾರ್ಗಸೂಚಿಯಂತೆ ಫಲಾನುಭವಿಯಾಗಿ ಆಯ್ಕೆಯಾಗದಿದ್ದರೂ ಬೇರೆಯವರ ಮನೆಯ ಮುಂದೆ ಹಂತವಾರು ಛಾಯಾಚಿತ್ರ ತೆಗೆಸಿಕೊಂಡು ರೂ. 59,800 ಗಳನ್ನು ಸದರಿಯವರ ಖಾತೆಗೆ ಜಮೆ ಮಾಡಿಸಿಕೊಂಡು, ಡ್ರಾ ಮಾಡಿಕೊಳ್ಳುವುದರ ಮೂಲಕ ಸರ್ಕಾರದ ಹಣ ದುರುಪಯೋಗ ಪಡಿಸಿಕೊಂಡಿರುವುದಾಗಿ ಸದರಿಯವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳಲು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀಮತಿ ಎಂ.ಎನ್.ಸವಿತಾ, ಸದಸ್ಯರು, ಹಾಕತ್ತೂರು ಗ್ರಾಮ ಪಂಚಾಯಿತಿ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ ಇವರಿಗೆ ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರಲ್ಲಿ ಶ್ರೀಮತಿ ಎಂ.ಎನ್.ಸವಿತಾ ಇವರಿಗೆ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ನೀಡಲಾಗಿದ್ದು, ಸದರಿಯವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ನ್ಯಾಯಾಲಯದಲ್ಲಿ ನಡೆದ ಮೌಖಿಕ ವಿಚಾರಣೆಗೆ ಹಾಜರಾಗಿ ಶ್ರೀ ಎಂ.ಯು.ಹನೀಫ್ ಹಿಂದಿನ ಅಧ್ಯಕ್ಷರು, ಹಾಕತ್ತೂರು ಗ್ರಾಮ ಪಂಚಾಯಿತಿ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ ರವರು ಹಣ ದುರುಪಯೋಗ ಪಡಿಸಿಕೊಂಡ ನಂತರ ಎಸ್.ಬಿ.ಐ. ಬ್ಯಾಂಕ್ ಖಾತೆಗೆ ಸಂಬಂಧಪಟ್ಟ ರೂ.20,000/-, ರೂ.20,000/- ಮತ್ತು ರೂ.18,500/- ಮೊಬಲಗಿಗೆ ಚೆಕ್ ನೀಡಿ ಹಣ ಡ್ರಾ ಮಾಡಿ ಸರ್ಕಾರಕ್ಕೆ ಹಣ ಪಾವತಿಸುವಂತೆ ತನಗೆ ತಿಳಿಸಿರುತ್ತಾರೆಂದು ಆಪಾದಿತ ಸದಸ್ಯರಾದ ಶ್ರೀಮತಿ ಎಂ.ಎನ್.ಸವಿತಾ ರವರು ಹೇಳಿಕೆ ನೀಡಿರುತ್ತಾರೆ.

ಪ್ರಕರಣಕ್ಕೆ ಸಂಬಂಧಪಟ್ಟಂತೆ ಮೌಖಿಕ ಹೇಳಿಕೆ ಹಾಗೂ ದಾಖಲಾತಿಗಳನ್ನು ಪರಿಶೀಲಿಸಲಾಗಿದ್ದು, ಶ್ರೀಮತಿ ಎಂ.ಎನ್.ಸವಿತಾ ಇವರ ವಿರುದ್ಧ ಆರೋಪ ಸಾಬೀತಾಗದೇ ಇರುವುದರಿಂದ ಅವರ ವಿರುದ್ಧ ಆರೋಪವನ್ನು ಕೈಬಿಡಲು ಮತ್ತು ಶ್ರೀ ಎಂ.ಯು.ಹನೀಫ್, ಹಿಂದಿನ ಅಧ್ಯಕ್ಷರು ರವರು ಹಣ ದುರುಪಯೋಗ ಪಡಿಸಿಕೊಂಡಿರುವುದು ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರಿಂದ ಹಣ ವಸೂಲಿ ಮಾಡಲು ಹಾಗೂ ಕಾನೂನು ಕ್ರಮ ಕೈಗೊಳ್ಳಲು ತೀರ್ಮಾನಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/633/ಗ್ರಾಪಂಅ/2017 ಬೆಂಗಳೂರು, ದಿನಾಂಕ: 11-04-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಎಂ.ಎನ್.ಸವಿತಾ, ಸದಸ್ಯರು ಇವರ ವಿರುದ್ಧ ಆರೋಪ ಸಾಬೀತಾಗದೇ ಇರುವುದರಿಂದ ಸದರಿಯವರ ವಿರುದ್ಧ ಆರೋಪವನ್ನು ಕೈಬಿಡಲು ಆದೇಶಿಸಿದೆ.

ಶ್ರೀ ಎಂ.ಯು.ಹನೀಫ್, ಹಿಂದಿನ ಅಧ್ಯಕ್ಷರು ರವರು ಹಣ ದುರುಪಯೋಗ ಪಡಿಸಿಕೊಂಡಿರುವುದು ಸಾಬೀತಾಗಿರುವ ಹಿನ್ನೆಲೆಯಲ್ಲಿ ಸದರಿಯವರಿಂದ ಹಣ ವಸೂಲಿ ಮಾಡಲು ಹಾಗೂ ಕಾನೂನು ಕ್ರಮ ಕೈಗೊಳ್ಳಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಗಳು:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಡಗು ಜಿಲ್ಲೆ,
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ.
3) ಶ್ರೀಮತಿ ಎಂ.ಎನ್.ಸವಿತಾ, ಸದಸ್ಯರು, ಹಾಕತ್ತೂರು ಗ್ರಾಮ ಪಂಚಾಯಿತಿ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ.
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹಾಕತ್ತೂರು ಗ್ರಾಮ ಪಂಚಾಯಿತಿ, ಮಡಿಕೇರಿ ತಾಲ್ಲೂಕು, ಕೊಡಗು ಜಿಲ್ಲೆ.
5) ಗಣಕ ಕೋಶ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.